ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಮನೆ ಮನೆಗೆ ಗಂಗೆ
ಜಲ ಜೀವನ್ ಮಿಷನ್

### ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಜಲಸಂರಕ್ಷಣೆಗೆ ರಹದಾರಿಯಾದ

# ಬೂದುನೀರು ನಿರ್ವಹಣಾ ಘಟಕ



ಗ್ರಾಮಗಳ ಅಭಿವೃದ್ಧಿಯಿಂದ ದೇಶದ ಏಳಿಗೆ ಸಾಧ್ಯ. ಹಾಗೆಯೇ ಗ್ರಾಮೀಣ ಭಾಗದಲ್ಲಿ ಸಂಪೂರ್ಣ ಸ್ವಚ್ಛತೆ ಸಾಧಿಸಿದಲ್ಲಿ ಮಾತ್ರ ಸ್ವಚ್ಛ ಭಾರತದ ಕನಸು ಸಾಕಾರಗೊಳ್ಳಬಹುದು. ಈ ನಿಟ್ಟಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ಅನೇಕ ಚಟುವಟಿಕೆಗಳ ಮೂಲಕ ಗ್ರಾಮಗಳಲ್ಲಿ ನೈರ್ಮಲ್ಯ ಕಾಪಾಡಲು ಮುಂದಡಿ ಇಟ್ಟಿದೆ. ಅದರಲ್ಲಿಯೂ ಬೂದು ನೀರು ನಿರ್ವಹಣೆ ಕಾಮಗಾರಿಯು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಜಲಸಂರಕ್ಷಣೆಗೆ ರಹದಾರಿಯಾಗಿದೆ.

ಜಿಲ್ಲೆಯಲ್ಲಿ ಈ ಮೊದಲು ಅಲ್ಲಲ್ಲಿ ಕೊಳಚೆ ನೀರು ನಿಂತು, ರೋಗಾಣುಗಳು ಉತ್ಪತ್ತಿಯಾಗಿ ಆರೋಗ್ಯಪೂರ್ಣ ಹಾಗೂ ಸುಸ್ಥಿರ ಸಮಾಜ ನಿರ್ಮಾಣಕ್ಕೆ ತೊಡಕಾಗಿತ್ತು. ಸಾಂಕ್ರಾಮಿಕ ಕಾಯಿಲೆಗಳು ಕಾಣಿಸಿಕೊಂಡು ಜನಸಾಮಾನ್ಯರಿಗೆ ತೊಂದರೆಯಾಗುತ್ತಿತ್ತು. ದ್ರವ ತ್ಯಾಜ್ಯ ಜಲಮೂಲ ಸೇರಿ ಜಲಮಾಲಿನ್ಯಕ್ಕೂ ಎಡೆಮಾಡಿಕೊಟ್ಟಿತ್ತು. ಆದ್ರೆ ಸ್ವಚ್ಛ ಭಾರತ್‌ಮಿಷನ್ (ಗ್ರಾ) ಹಾಗೂ ನರೇಗಾ ಯೋಜನೆಯಿಂದ ಗ್ರಾಮೀಣ ಪ್ರದೇಶಗಳ ಈ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡಲು ಸಾಧ್ಯವಾಯಿತು. ಕೊಳಚೆ ನೀರು ಹರಿಯುವ ಸ್ಥಳದಲ್ಲಿ ಸಸ್ಯಗಳನ್ನು ಬಳಸಿಕೊಂಡು ಬೂದು ನೀರನ್ನು ತಾಂತ್ರಿಕವಾಗಿ ಮತ್ತು ನೈಸರ್ಗಿಕವಾಗಿ ಸಂಸ್ಕರಿಸಬಹುದಾದ ವಿಧಾನವನ್ನು ಅಳವಡಿಸಿಕೊಳ್ಳಲಾಯಿತು.

**ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ ಕನಿಷ್ಠ 3 ಬೂದುನೀರು ಸಂಸ್ಕರಣಾ ಘಟಕಗಳನ್ನು ನಿರ್ಮಿಸುವ ಗುರಿಯೊಂದಿಗೆ ಕಾಮಗಾರಿಯನ್ನು ಅನುಷ್ಠಾನಗೊಳಿಸಲಾಗಿದೆ. ಪ್ರಸ್ತುತ ಜಿಲ್ಲೆಯಲ್ಲಿ ಆಯ್ಕೆಯಾಗಿರುವ ಒಟ್ಟು 15 ಗ್ರಾಪಂಗಳಲ್ಲಿ ಒಟ್ಟು 1,196 ಘಟಕಗಳ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ. ಇನ್ನು, ದೇವನಹಳ್ಳಿ ತಾಲ್ಲೂಕಿನ ಚನ್ನಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕಿನ ತಿಟ್ಟೂರು, ಹೊಸಕೋಟೆ ತಾಲ್ಲೂಕಿನ ನಂದಗುಡಿ, ನೆಲಮಂಗಲ ತಾಲ್ಲೂಕಿನ ಕಣೇಗೌಡನಹಳ್ಳಿ ಗ್ರಾಪಂಗಳಲ್ಲಿ ರಾಜ್ಯಕ್ಕೆ ಮಾದರಿಯಾದ ಬೂದು ನೀರು ನಿರ್ವಹಣೆ ಘಟಕಗಳನ್ನು ಅಭಿವೃದ್ಧಿಪಡಿಸಲಾಗಿದೆ.**

# ಜಲ ಮಾಲಿನ್ಯ ನಿಯಂತ್ರಣಕ್ಕೆ ಸಹಕಾರಿ

ಬೂದುನೀರು ನಿರ್ವಹಣೆ ಕಾಮಗಾರಿಯು ಜಲಮಾಲಿನ್ಯ ನಿಯಂತ್ರಣಕ್ಕೆ ಮೊದಲ ಅಸ್ತ್ರವಾಗಿದೆ. ಈ ಹಿಂದೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಗ್ರಾಮೀಣ ಪ್ರದೇಶದ ಮನೆಗಳಲ್ಲಿ ಪಾತ್ರೆ, ಬಟ್ಟೆ ತೊಳೆದ ನೀರು, ಬಚ್ಚಲು ನೀರು ಸೇರಿದಂತೆ ಗೃಹ ಬಳಕೆಯ ಬೂದು ನೀರು ನದಿ, ಹಳ್ಳ ಸೇರಿ ಜಲಮೂಲಗಳ ಮಾಲಿನ್ಯಕ್ಕೆ ಕಾರಣವಾಗುತ್ತಿತ್ತು. ಆದ್ರೆ ಇದನ್ನು ತಡೆದು ಬೂದುನೀರು ಜಲಮೂಲಗಳಿಗೆ ಸೇರುವ ಮುನ್ನವೇ ಸಂಸ್ಕರಣೆ ಮಾಡುವ ಉದ್ದೇಶದಿಂದ ಬೂದು ನೀರು ನಿರ್ವಹಣೆ ಘಟಕ ಸ್ಥಾಪಿಸಲಾಗುತ್ತಿದೆ. ಇದರಿಂದ ನೀರು ನಿಂತು ಕೊಳಚೆಯಾಗುವುದು ತಪ್ಪಲಿದೆ. ಜೊತೆಗೆ ಬೂದುನೀರನ್ನು ವೈಜ್ಞಾನಿಕವಾಗಿ ನೆಲದಲ್ಲಿ ಇಂಗಿಸಿ ಅಂತರ್ಜಲಮಟ್ಟ ಹೆಚ್ಚಿಸಲು ಪ್ರಯತ್ನಿಸಲಾಗುತ್ತಿದ್ದು, ಗ್ರಾಮೀಣ ಪ್ರದೇಶದಲ್ಲಿ ಜಲ ಮಾಲಿನ್ಯ ತಡೆಯಲು ಸಾಧ್ಯವಾಗಲಿದೆ.

ಬೂದು ನೀರು ನಿರ್ವಹಣಾ ಘಟಕಗಳ ನಿರ್ಮಾಣದಿಂದ ಗ್ರಾಮೀಣ ಪ್ರದೇಶದಲ್ಲಿ ಸ್ವಚ್ಛತೆ, ಶುಚಿತ್ವ ಮತ್ತು ಆರೋಗ್ಯಕರ ವಾತಾವರಣ ನಿರ್ಮಾಣವಾಗಿದೆ. ಈ ಮಾದರಿಯು ಜಲಸಂರಕ್ಷಣೆ, ಅಂತರ್ಜಲ ಮಟ್ಟ ಹೆಚ್ಚಿಸಲು ನೆರವಾಗಿದೆ. ಮಾತ್ರವಲ್ಲ ಸಂಸ್ಕರಿಸಿದ ಬೂದುನೀರನ್ನು ಕೃಷಿ ಹಾಗೂ ಇತರೆ ಚಟುವಟಿಕೆಗಳಿಗೂ ಬಳಕೆ ಮಾಡಬಹುದಾಗಿದೆ.

ಬೂದು ನೀರು ನಿರ್ವಹಣೆ ಘಟಕಗಳ ಮೂಲಕ ದ್ರವ ತ್ಯಾಜ್ಯವನ್ನು ವೈಜ್ಞಾನಿಕ ಮತ್ತು ತಾಂತ್ರಿಕ ಮಾದರಿಯಲ್ಲಿ ಸಂಸ್ಕರಿಸಲಾಗುತ್ತಿದೆ. ಜಿಲ್ಲೆಯಲ್ಲಿ ಪ್ರಸ್ತುತ ಆರ್ಥಿಕ ವರ್ಷದಲ್ಲಿ, ಗ್ರಾಪಂಗಳಲ್ಲಿ ರಾಜ್ಯಕ್ಕೆ ಮಾದರಿಯಾಗುವಂತೆ ಬೂದು ನೀರು ನಿರ್ವಹಣೆ ಘಟಕ ಕಾಮಗಾರಿ ಕೈಗೊಳ್ಳಲಾಗಿದೆ.



**ಡಾ.ಕೆ.ಎನ್. ಅನುರಾಧ**
ಸಿಇಒ, ಬೆಂಗಳೂರು ಗ್ರಾಮಾಂತರ ಜಿ.ಪಂ